ಚುಕ್ಕೆ ಗುರುತಿಲ್ಲದ
19/08/26

159ಎಲ
(03)

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:ಎತ್ತಿನಹೊಳೆ ಯೋಜನೆಯಿಂದ ಸುಮಾರು 7 ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಮಹಾತ್ವಕಾಂಕ್ಷೆ ಯೋಜನೆ ಪ್ರಾರಂಭಿಸಿದರು, ಇದುವರೆಗೂ ಕಾರ್ಯಗತಗೊಳ್ಳದೇ ಇರುವುದರ ಬಗ್ಗೆ ಸಮಗ್ರ ಯೋಜನೆ ಬಗ್ಗೆ ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ, ಪಶ್ಚಿಮಘಟ್ಟದ ಮೇಲ್ಭಾಗದಲ್ಲಿ ಹರಿಯುವ ಎತ್ತಿನಹೊಳೆ, ಕಾಡುಮನೆಹೊಳೆ, ಕೇರಿಹೊಳೆ ಮತ್ತು ಹೊಂಗದಹಳ್ಳದಿಂದ ಮುಂಗಾರು ಮಳೆ ಅವಧಿಯಲ್ಲಿ 24.01 ಟಿ.ಎಂ.ಸಿ ಪ್ರಮಾಣದ ಪ್ರವಾಹದ ನೀರನ್ನು 07 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ತುಮಕೂರು, ಹಾಸನ ಹಾಗೂ ಚಿಕ್ಕಮಗಳೂರಿನ ಬರಪೀಡಿತ 29 ತಾಲ್ಲೂಕಿನ 38 ಪಟ್ಟಣ ಪ್ರದೇಶದ ಹಾಗೂ 6657 ಗ್ರಾಮಗಳ ಸುಮಾರು 75.59 ಲಕ್ಷ (Projected population for 2023-24) ಜನರಿಗೆ ಮತ್ತು ಜಾನುವಾರುಗಳಿಗೆ 14.056 ಟಿ.ಎಂ.ಸಿ ಕುಡಿಯುವ ನೀರನ್ನು ಒದಗಿಸುವುದು ಜೊತೆಗೆ 05 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಹಾಸನ ಹಾಗೂ ತುಮಕೂರು ವ್ಯಾಪ್ತಿಯಲ್ಲಿ ಬರುವ 527 ಕೆರೆಗಳಿಗೆ 9.953 ಟಿ.ಎಂ.ಸಿ ಪ್ರಮಾಣದ ನೀರನ್ನು ಕೆರೆಗಳ ಸಾಮರ್ಥ್ಯದ ಶೇ. 50% ರಷ್ಟು ತುಂಬಿಸಿ ಅಂತರ್ಜಲ ಮರುಪೂರಣ ಮಾಡುವುದು ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಉದ್ದೇಶವಾಗಿದ್ದು, ಸದರಿ ಯೋಜನೆಯ ಮೂಲ ಅಂದಾಜು ರೂ. 8,323.50 ಕೋಟಿಗಳನ್ನು ಸರ್ಕಾರದ ಆದೇಶ ದಿ:13.07.2012ರಲ್ಲಿ ಅನುಮೋದಿಸಲಾಯಿತು ಮತ್ತು ರೂ.23,251.66 ಕೋಟಿ ಮೊತ್ತದ ಪುನರ್ ಪರಿಷ್ಕೃತ ಯೋಜನಾ ವರದಿಗೆ ಸರ್ಕಾರದ ಆದೇಶ ದಿನಾಂಕ:10.01.2023 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಎರಡು ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ.

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳನ್ನು 54 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದ್ದು, ಈ ಪೈಕಿ 20 ಪ್ಯಾಕೇಜ್ ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದ ಪ್ಯಾಕೇಜ್ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.

**ಹಂತ-1:**

ಹಂತ-1ರಲ್ಲಿ ಕೈಗೆತ್ತಿಕೊಳ್ಳಲಾಗಿರುವ ಏತ ಕಾಮಗಾರಿಗಳು ಮತ್ತು ವಿದ್ಯುತ್ ಪೂರೈಕೆ ಕಾಮಗಾರಿಗಳನ್ನು 7 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿ 2024ನೇ ಸಾಲಿನಲ್ಲಿ ಪ್ರಾಯೋಗಿಕವಾಗಿ ಚಾಲನೆಗೊಳಿಸಿದ್ದು, ದಿ:06-09-2024ರಿಂದ ಗುರುತ್ವ ಕಾಲುವೆಯ ಸರಪಳಿ:32.50 ಕಿ.ಮೀ ವರೆಗೆ ನೀರನ್ನು ಹರಿಸಲಾಗಿದೆ.

**ಹಂತ-2:**

ಹಂತ-2 ರಲ್ಲಿ 252.61 ಕಿ.ಮೀ ಉದ್ದದ ಗುರುತ್ವ ಮುಖ್ಯ ಕಾಲುವೆ ನಿರ್ಮಾಣ, ಸಮತೋಲನಾ ಜಲಾಶಯ ನಿರ್ಮಾಣ, ಫೀಡರ್ ಪೈಪ್‌ಲೈನ್ ಕಾಲುವೆ ನಿರ್ಮಾಣ ಕಾಮಗಾರಿಗಳನ್ನು ಒಳಗೊಂಡಿರುತ್ತದೆ.

ಗುರುತ್ವ ಕಾಲುವೆಯ ಒಟ್ಟು 252.61 ಕಿ.ಮೀ ಉದ್ದದ ನಿರ್ಮಾಣದ ಪೈಕಿ ಸುಮಾರು 226.09 ಕಿ.ಮೀ ಉದ್ದದ ಕಾಲುವೆ ಕಾಮಗಾರಿಗಳು ಪೂರ್ಣಗೊಂಡಿದ್ದು, 17.65 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಬಾಕಿ 8.87 ಕಿ.ಮೀ ಕಾಲುವೆ ನಿರ್ಮಾಣ ಕಾಮಗಾರಿಗಳು ಅರಣ್ಯ ಪ್ರದೇಶದಲ್ಲಿ ಹಾದು ಹೋಗುತ್ತಿದ್ದುದರಿಂದ ಪ್ರಾರಂಭಗೊಂಡಿರುವುದಿಲ್ಲ.

ದಿನಾಂಕ: 01.04.2026 ರಂದು ಏಕೀಕೃತ ಅರಣ್ಯ ತೀರುವಳಿ ಪ್ರಸ್ತಾವನೆಗೆ MoEF &Cc ಇವರಿಂದ Stage-1/In-Priniciple ಅನುಮೋದನೆ ದೊರೆತಿದ್ದು, ದಿನಾಂಕ:20.05.2026ರಂದು ಒಂದು ವರ್ಷದ ಅವಧಿಗೆ Working permission (Concretization ಹೊರತುಪಡಿಸಿ, ಬಾಕಿ ಮಣ್ಣಿನ ಅಗೆತ ಕಾಮಗಾರಿಗಳ ನಿರ್ವಹಣೆ) ಗೆ ಅನುಮತಿ ಸಹ ದೊರೆತಿರುವುದರಿಂದ ಪ್ರಸ್ತುತ ಕಾಮಗಾರಿಗಳನ್ನು ಪ್ರಾರಂಭಿಸಲಾಗಿರುತ್ತದೆ.

**ಸಮತೋಲನಾ ಜಲಾಶಯ**:

ಸಮತೋಲನಾ ಜಲಾಶಯಕ್ಕಿಂತ ಮೊದಲು ಕವಲೊಡೆಯುವ ಮಧುಗಿರಿ-ಪಾವಗಡ ಫೀಡರ್, ಟಿ.ಜಿ.ಹಳ್ಳಿ - ರಾಮನಗರ ಫೀಡರ್ ಹಾಗೂ ಗೌರಿಬಿದನೂರು ಫೀಡರ್ ಪೈಪ್‌ಲೈನ್ ಕಾಮಗಾರಿಗಳನ್ನು 4 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಒಟ್ಟು 254.97 ಕಿ.ಮೀ ಪೈಕಿ 249.21 ಕಿ.ಮೀ ಕಾಮಗಾರಿಯು ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.

ಪ್ರಸ್ತುತ ಪುನರ್ ಪರಿಷ್ಕೃತ ಯೋಜನಾ ವರದಿಯಂತೆ ಕೊರಟಗೆರೆ ತಾಲ್ಲೂಕು ಭೈರಗೊಂಡ್ಲು ಗ್ರಾಮದ ಸಮೀಪದ ಸ್ಥಳದ ಬದಲಾಗಿ ದೊಡ್ಡಬಳ್ಳಾಪುರ ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಅನುಮೋದನೆ ಪಡೆದುಕೊಂಡು ಗುತ್ತಿಗೆದಾರರಿಗೆ ಕರಾರು ವಹಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ದಿನಾಂಕ:06.11.2025 ರಂದು ನಡೆದ ನಿರ್ದೇಶಕರ ಮಂಡಳಿಯ 33ನೇ ಸಭೆಯಲ್ಲಿ 1.88 ಟಿ.ಎಂ.ಸಿ ಸಂಗ್ರಹಣಾ ಸಾಮರ್ಥ್ಯದ ಲಕ್ಕೇನಹಳ್ಳಿ ಸಮತೋಲನಾ ಜಲಾಶಯದ ನಿರ್ಮಾಣದ ಜೊತೆಗೆ ಮುಂಬರುವ ದಿನಗಳಲ್ಲಿ ಕುಡಿಯುವ ನೀರಿಗಾಗಿ ಬೇಡಿಕೆಯು ಹೆಚ್ಚಾಗುವ ಸಂಭವವಿರುವುದರಿಂದ ಕೊರಟಗೆರೆ ತಾಲ್ಲೂಕು ವಡೇರಹಳ್ಳಿ ಸಮೀಪ 1.20 ಟಿ.ಎಂ.ಸಿ ಸಂಗ್ರಹಣಾ ಸಾಮರ್ಥ್ಯದ ಮತ್ತೊಂದು ಸಮತೋಲನಾ ಜಲಾಶಯವನ್ನು ನಿರ್ಮಿಸುವ ಕಾಮಗಾರಿಯ ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಅನುಮೋದನೆ ನೀಡಲಾಗಿದ್ದು, ಅದರನ್ವಯ ಸಮಾಲೋಚಕರನ್ನು ನೇಮಿಸಿಕೊಳ್ಳಲು ಟೆಂಡರ್ ಆಹ್ವಾನಿಸಲಾಗಿರುತ್ತದೆ.

ಸಮತೋಲನಾ ಜಲಾಶಯದ ನಂತರದಲ್ಲಿ ಬರುವ ಕೋಲಾರ ಲಿಫ್ಟ್ ಪ್ಯಾಕೇಜ್-1 ಮತ್ತು ಗುರುತ್ವ ಪೈಪ್ ಲೈನ್ ಪ್ಯಾಕೇಜ್-2 ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದ್ದು, ಕೋಲಾರ ಗುರುತ್ವ ಪೈಪ್ ಲೈನ್ ಪ್ಯಾಕೇಜ್-3 ಮತ್ತು 4 ಹಾಗೂ ಕೋಲಾರ & ಶ್ರೀನಿವಾಸಪುರ ಫೀಡರ್ ಪೈಪ್ ಲೈನ್ ನಿರ್ಮಾಣದ 05 ಪ್ಯಾಕೇಜ್ ಕಾಮಗಾರಿಗಳ ಪಂಕ್ತಿಕರಣ (Pipeline alignment), ವಿನ್ಯಾಸ, ನಕ್ಷೆಗಳಿಗೆ ಹಾಗೂ QAP ಗಳಿಗೆ ಅನುಮೋದನೆ ನೀಡಲಾಗುತ್ತಿದ್ದು, ಭೂ ಸ್ವಾಧೀನ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ರೈತರೊಂದಿಗೆ ತ್ರಿಪಕ್ಷೀಯ ಒಪ್ಪಂದ ಮಾಡಿಕೊಂಡು ಶೀಘ್ರವಾಗಿ ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ಜರುಗಿಸಲಾಗುತ್ತಿದೆ.

**ಯೋಜನೆಯ ವಿಳಂಬಕ್ಕೆ ಕಾರಣ**:

ಸದರಿ ಯೋಜನೆಯನ್ನು 2013-14ನೇ ಸಾಲಿನಿಂದ ಹಂತ ಹಂತವಾಗಿ ಕಾಲಕಾಲಕ್ಕೆ ಪ್ಯಾಕೇಜ್ ಕಾಮಗಾರಿಗಳಲ್ಲಿ ಅನುಷ್ಠಾನಕ್ಕಾಗಿ ಕೈಗೆತ್ತಿಕೊಳ್ಳಲಾಗುತ್ತಿದ್ದು, ಯೋಜನೆಯ ಅನುಷ್ಠಾನದಲ್ಲಿ ಅರಣ್ಯ ತೀರುವಳಿ, NGT (National Green Tribunal) ಪ್ರಕರಣಗಳು, ರಾಷ್ಟ್ರೀಯ ಹೆದ್ದಾರಿ ಅನುಮತಿ, ರೈಲ್ವೇ ಇಲಾಖೆಯ ಅನುಮತಿ, ಭೂಸ್ವಾಧೀನ ಪ್ರಕ್ರಿಯೆಗಳಲ್ಲಿನ ವಿಳಂಬ ಹಾಗೂ ಸಂಬಂಧಿಸಿದ ಅನ್ಯ ಇತರೆ ಇಲಾಖೆಗಳ ಅನುಮತಿ/ ತೀರುವಳಿ ಪಡೆದು ಕಾಮಗಾರಿಗಳನ್ನು ಪೂರ್ಣಗೊಳಿಸುವಲ್ಲಿ ವಿಳಂಬವಾಗಿರುತ್ತದೆ. ಆದಾಗ್ಯೂ, ಭೂಸ್ವಾಧೀನ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ರೈತರ ಮನವೊಲಿಸಿ

ತ್ರಿಪಕ್ಷೀಯ ಕರಾರುಗಳ ಮೂಲಕ ಜಮೀನುಗಳನ್ನು ಸ್ವಾಧೀನಪಡಿಸಿಕೊಂಡು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.

ಎತ್ತಿನಹೊಳೆ ಯೋಜನೆಯು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, 2027ರ ಅಂತ್ಯಕ್ಕೆ ಆದ್ಯತೆ ಮೇಲೆ ಸಂಪೂರ್ಣವಾಗಿ ಪೂರ್ಣಗೊಳಿಸಿ ಉದ್ದೇಶಿತ 7 ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸಲು ಯೋಜಿಸಲಾಗಿದೆ.

**ಕಡತ ಸಂಖ್ಯೆ: WRD 78 WLA 2026**

**(ಎನ್.ಚೆಲುವರಾಯಸ್ವಾಮಿ)**
**ಜಲಸಂಪನ್ಮೂಲ ಸಚಿವರು**